**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧನ್ಯಾದಂ ರವರ ನ್ಯಾಯಾಲಯ, ಕೊಳ್ಳೇಗಾಲ.**

**ಸಿಸಿ ನಂ.** 210/2021

| | | |
|---|---|---|
| ಸಾಕ್ಷಿಯ ಹೆಸರು | : ಬಸವಣ್ಣ | |
| ತಂದೆಯ ಹೆಸರು | : ಲಿಂಗಣ್ಣ | |
| ವಯಸ್ಸು | : 70 ವರ್ಷ | |
| ಉದ್ಯೋಗ | ನಿವೃತ್ತ ಪಿ ಎಸ್ ಐ | ಚಾಸಾ –17 |
| ವಾಸ ಸ್ಥಳ | : ಮೈಸೂರು | ಫ್ರಾಸಾ –6 |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾದ ದಿನಾಂಕಃ** 11.08.2026

**ಮುಖ್ಯ ವಿಚಾರಣೆ – ಮಾನ್ಯ ಸ.ಸ.ಅ. ರವರಿಂದ**

ನಾನು 22.08.2015 ರಿಂದ 30.11.2016 ರವರೆಗೆ ಕೊಳ್ಳೇಗಾಲ ಪಟ್ಟಣ ಪೋಲಿಸ್ ಠಾಣೆಯಲ್ಲಿ ಪಿಎಸ್ಐಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿನಾಂಕ 26.11.2016 ರಂದು ರಾತ್ರಿ 10.15 ಗಂಟೆ ಸಮಯದಲ್ಲಿ ಕೊಳ್ಳೇಗಾಲ ಪಟ್ಟಣದ ವಾಸಿಯಾದ ಚಾಸಾ 1 ರವರು ಠಾಣೆಗೆ ಹಾಜರಾಗಿ ಕೊಟ್ಟ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊ.ನಂ 159/2016 ರಲ್ಲಿ ಪ್ರಕರಣ ದಾಖಲು ಮಾಡಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ ದೂರಿನ ಪ್ರಕಾರ ಈ ಅಪರಾಧ ಘೋರ ಅಪರಾಧವಾದ್ದರಿಂದ ಮುಂದಿನ ತನಿಖೆಗಾಗಿ ಚಾಸಾ 18 ರವರಿಗೆ ಕಡತವನ್ನು ಹಸ್ತಾಂತರಿಸಿರುತ್ತೇನೆ. ಸಾಕ್ಷಿಯು ದೂರಿನ ಯಥಾನಕಲನ್ನು ನೋಡಿ ಅದರಲ್ಲಿರುವ ಸಹಿಯನ್ನು ನೋಡಿ ತಮ್ಮದೇ ಸಹಿ ಎಂದು ಗುರುತಿಸಿರುತ್ತಾರೆ.

**ಪಾಟೀ ಸವಾಲು – ಆರೋಪಿಗಳ ಪರ ವಕೀಲರಿಂದ**

ಚಾಸಾ 1 ರವರಿಗೆ ಸಹಾಯ ಮಾಡಲು ಸುಳ್ಳು ದೂರನ್ನು ಸ್ವೀಕರಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಹೇಳುವಂತೆ ಆ ದಿನ ಯಾವುದೇ ಘಟನೆ ಆಗಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಪಡಿಸಲಾಯಿತು. )

ಓ ಹೇ ಕೇ ಸಾ ಸ ಇ ಒ

(ಸುನೀತ )
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ ದಂ. ಕೊಳ್ಳೇಗಾಲ.